ಅಧ್ಯಕ್ಷರು : ಪ್ರಸ್ತಾಪ ಏನೆಂದರೆ

"1998ರ ಕರ್ನಾಟಕ ಧನವಿನಿಯೋಗ (ನಂ. 2) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತ್ತು ಮತ್ತು ಅನುಮತಿ ನೀಡಲಾಯಿತು

ಶ್ರೀ ಸಿದ್ದರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ (ನಂ. 2) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : X ವಿಧೇಯಕವನ್ನು ಮಂಡಿಸಲಾಗಿದೆ. X

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ (ನಂ.2) ವಿಧೇಯಕ, 1998 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ (ನಂ.2) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ;

"1998ರ ಕರ್ನಾಟಕ ಧನವಿನಿಯೋಗ (ನಂ.2) ವಿಧೇಯಕವನ್ನು ಪರ್ಯಾಲೋಚಿಸಿವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು : "ಖಂಡ 2 ಮತ್ತು 3, ಎರಡೂ ಸೇರಿದಂತೆ, ಈ ವಿಧೇಯಕ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು

(ಖಂಡ 2 ಮತ್ತು 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ

ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ, ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ದರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1998ರ ಕರ್ನಾಟಕ ಧನವಿನಿಯೋಗ (ನಂ.2) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"1998ರ ಕರ್ನಾಟಕ ಧನವಿನಿಯೋಗ(ನಂ.2) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಪೌರಸಭೆಗಳ ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕ, 1997

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಮಿರಾಜುದ್ದೀನ ಎನ್. ಪಟೇಲ್ (ಪೌರಾಡಳಿತ ರಾಜ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಕರ್ನಾಟಕ ಪೌರಸಭೆಗಳ ಮತ್ತು ಇತರ ಕಾನೂನು (ತಿದ್ದುಪಡಿ)ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಅಧ್ಯಕ್ಷರು : ಇದಕ್ಕೆ ಎಲ್ಲರ ಒಪ್ಪಿಗೆ ಇದೆ. ಮಾನ್ಯ ಮಾಧುಸ್ವಾಮಿಯವರೇ, ಇದಕ್ಕೆ ಎಕ್ಸಪ್ಲನೇಷನ್ ಬೇಕಾಗಿದೆಯೇ? ಇದುಎಲ್ಲರಿಗೂ ಗೊತ್ತಿದೆ. ಈ ಬಿಲ್ ಪಾಸ್ ಮಾಡಬಹುದಲ್ಲಾ?

ಶ್ರೀ ಜೆ.ಸಿ.ಮಾಧುಸ್ವಾಮಿ : ಪಾಸ್ ಮಾಡಬಹುದು.

ಅಧ್ಯಕ್ಷರು : ಇದನ್ನು ವಿಶೇಷವಾಗಿ ಮಾನ್ಯ ಮಾಧುಸ್ವಾಮಿಯವರಿಗೆ ತಂದಿರುವಂಥಾದ್ದು.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ.

"ವಿಧಾನಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 1998ರ ಕರ್ನಾಟಕ ಪೌರಸಭೆಗಳ ಮತ್ತು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು"